ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2014-15 ದಿನಾಂಕ: 28-08-2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ವ್ಯಾಸಂಗಕ್ಕಾಗಿ ವಿದೇಶಕ್ಕೆ ತೆರಳಲಿರುವ ವಿದ್ಯಾರ್ಥಿಗಳಿಗೆ ಸರ್ಕಾರದ ವತಿಯಿಂದ ಚೆಕ್ ವಿತರಣಾ ಕಾರ್ಯಕ್ರಮ.<br>ಅಧ್ಯಕ್ಷತೆ:-<br>ಹೆಚ್. ಆಂಜನೇಯ<br>ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು. | 29-8-2015<br>ಶನಿವಾರ<br>ಬೆಳಿಗ್ಗೆ<br>11-30 ಗಂಟೆಗೆ | ಕೊಠಡಿ ಸಂಖ್ಯೆ 334,<br>ಮೂರನೇ ಮಹಡಿ,<br>ಸಮ್ಮೇಳನ ಸಭಾಂಗಣ,<br>ವಿಧಾನಸೌಧ,.<br>ಬೆಂಗಳೂರು. |
| 2. | ಪತ್ರಿಕಾಗೋಷ್ಠಿ:<br>ದಿನೇಶ್ ಗುಂಡೂರಾವ್,<br>ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು | 29-8-2015<br>ಶನಿವಾರ<br>ಮಧ್ಯಾಹ್ನ<br>12-15 | ಕೊಠಡಿ ಸಂಖ್ಯೆ 242,<br>2ನೇ ಮಹಡಿ,<br>ವಿಕಾಸಸೌದ, ಬೆಂಗಳೂರು. |
| 3 | ಬೆಳ್ಳಿ ಸಿನಿಮಾ – ಬೆಳ್ಳಿಮಾತು:<br>ಬೆಳ್ಳಿ ಸಿನಿಮಾ – "ಹಾಡು ಹಕ್ಕಿ ಹಾಡು" ಚಿತ್ರದ ನಿರ್ದೇಶಕ ವಿ. ನಾಗೇಂದ್ರ ಶಾ ಅವರಿಂದ ಬೆಳ್ಳಿಮಾತು.<br>ಅಧ್ಯಕ್ಷತೆ:<br>ಎಸ್.ವಿ. ರಾಜೇಂದ್ರ ಸಿಂಗ್ ಬಾಬು, ಅಧ್ಯಕ್ಷರು,<br>ಕರ್ನಾಟಕ ಚಲನಚಿತ್ರ ಅಕಾಡೆಮಿ<br>ಅಂದು ನಮ್ಮೊಂದಿಗೆ<br>ಗೋಪಾಲ ವಾಜಪೇಯಿ,<br>ಹಿರಿಯ ಸಾಹಿತಿಗಳು<br>ಸುಧೀಂದ್ರ ಹಾಲ್ದೊಡ್ಡೇರಿ,<br>ಪರಿಸರ ಚಿಂತಕರು<br>ಯಶವಂತ ಸರದೇಶಪಾಂಡೆ,<br>ಚಿತ್ರ ನಿರ್ಮಾಪಕರು | 28-08-2015<br>ಶನಿವಾರ<br>ಸಂಜೆ<br>4-00 ಗಂಟೆಗೆ | ಚಾಮುಂಡೇಶ್ವರಿ ಸ್ಟುಡಿಯೋ,<br>ಮಿಲ್ಲರ್ಸ್ ರಸ್ತೆ, ಬೆಂಗಳೂರು |

ನಿರ್ದೇಶಕರ ಪರವಾಗಿ

**ಪತ್ರಿಕಾ ಪ್ರಕಟಣೆ**

## ರಾಜ್ಯ ಪ್ರಶಸ್ತಿ – 2015

ಬೆಂಗಳೂರು, ಆಗಸ್ಟ್ 28 (ಕರ್ನಾಟಕ ವಾರ್ತೆ)

ಡಿಸೆಂಬರ್ 3 ರಂದು ಆಚರಿಸಲ್ಪಡುವ "ವಿಶ್ವ ಅಂಗವಿಕಲರ ದಿನಾಚರಣೆ" ಅಂಗವಾಗಿ ಅಂಗವಿಕಲರ ಕಲ್ಯಾಣ ಕ್ಷೇತ್ರದಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿರುವ 08 ಸಂಸ್ಥೆಗಳಿಗೆ, ವಿಶಿಷ್ಟ ಸಾಧನೆ ಗೈದಿರುವ 02 ಸಂಸ್ಥೆಗಳಿಗೆ ಮತ್ತು 15 ಜನ ವ್ಯಕ್ತಿಗಳಿಗೆ ರಾಜ್ಯ ಪ್ರಶಸ್ತಿಯನ್ನು ನೀಡಲು ಪ್ರತಿ ವರ್ಷದಂತೆ ಈ ಸಾಲಿನಲ್ಲಿಯೂ ಸಹ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯು ಉದ್ದೇಶಿಸಿದೆ.

ವಿಕಲಚೇತನ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯು ವಿಕಲಚೇತನರರಿಗಾಗಿ ನಡೆಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳಲ್ಲಿ ಹಾಗೂ ಸರ್ಕಾರದ ವತಿಯಿಂದ ನಿರ್ವಹಿಸುತ್ತಿರುವ ವಿಶೇಷ ಶಾಲೆಗಳಲ್ಲಿ 15 ವರ್ಷಕ್ಕೂ ಮೇಲ್ಪಟ್ಟು ಸೇವೆ ಸಲ್ಲಿಸಿರುವ/ಸಲ್ಲಿಸುತ್ತಿರುವ ಶಿಕ್ಷಕರುಗಳಿಗೂ ಸಹ 05 ರಾಜ್ಯ ಪ್ರಶಸ್ತಿಗಳನ್ನು ನೀಡುತ್ತಿದೆ.

ಆಸಕ್ತರು ಅರ್ಜಿಗಳನ್ನು ಸಂಬಂಧಿಸಿದ ಜಿಲ್ಲೆಯ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಥವಾ ಇಲಾಖೆಯ ಈ ಕೆಳಗಿನ ವೆಬ್‌ಸೈಟ್‌ನಲ್ಲಿಯೂ ಸಹ ಪಡೆಯಬಹುದಾಗಿದೆ. (http://www.welfareofdisabled.kar.nic.in) ಇಲ್ಲಿಂದ ಪಡೆದು ಪೂರ್ಣವಾಗಿ ಭರ್ತಿಮಾಡಿದ ಅರ್ಜಿಗಳನ್ನು ಸೆಪ್ಟೆಂಬರ್ 25 ರೊಳಗೆ ಸಂಬಂಧಿಸಿದ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು, ಉಪ ನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆರವರ ಕಚೇರಿಯಲ್ಲಿ ಸಲ್ಲಿಸಲು ತಿಳಿಸಲಾಗಿದೆ. ಅರ್ಜಿಗಳನ್ನು ನಿರ್ದೇಶನಾಲಯಕ್ಕೆ ನೇರವಾಗಿ ಸಲ್ಲಿಸಬಾರದೆಂದು ಹಾಗೂ ಒಂದು ವೇಳೆ ಸಲ್ಲಿಸಿದಲ್ಲಿ ಅಂತಹ ಅರ್ಜಿಗಳನ್ನು ಮಾನ್ಯ ಮಾಡಲಾಗುವುದಿಲ್ಲವೆಂದು ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಮತ:ಜಿಪಿಆರ್.

## ಈ ವಾರದ ಬೆಳ್ಳಿಸಿನಿಮಾ–ಬೆಳ್ಳಿಮಾತು:
## "ಹಾಡುಹಕ್ಕಿ ಹಾಡು" ಚಲನಚಿತ್ರ ಪ್ರದರ್ಶನ, ಸಂವಾದ

ಬೆಂಗಳೂರು, ಆಗಸ್ಟ್ 27 (ಕರ್ನಾಟಕ ವಾರ್ತೆ)

ಕರ್ನಾಟಕ ಚಲನಚಿತ್ರ ಅಕಾಡೆಮಿಯು ಪ್ರತಿ ಶನಿವಾರ ನಡೆಸುವ ಬೆಳ್ಳಿಸಿನಿಮಾ–ಬೆಳ್ಳಿಮಾತು ಕಾರ್ಯಕ್ರಮದಡಿ ಆಗಸ್ಟ್ 28 ರ ಶನಿವಾರದಂದು ಬೆಳ್ಳಿ ಸಿನಿಮಾ "ಹಾಡುಹಕ್ಕಿ ಹಾಡು" ಚಲನಚಿತ್ರ ಪ್ರದರ್ಶನವನ್ನು ಏರ್ಪಡಿಸಲಾಗಿದೆ. ಈ ಚಿತ್ರದ ನಿರ್ದೇಶಕ ವಿ. ನಾಗೇಂದ್ರ ಶಾ ಅವರಿಂದ ಬೆಳ್ಳಿಮಾತು ಸಂವಾದ ಕಾರ್ಯಕ್ರಮ ನಡೆಯಲಿದೆ ಎಂದು ಅಕಾಡೆಮಿಯ ರಿಜಿಸ್ಟ್ರಾರ್ ಹೆಚ್. ಬಿ. ದಿನೇಶ್ ಅವರು ತಿಳಿಸಿದ್ದಾರೆ.

ಬೆಂಗಳೂರು ಮಿಲ್ಲರ್ಸ್ ರಸ್ತೆಯ ಚಾಮುಂಡೇಶ್ವರಿ ಸ್ಟುಡಿಯೋದಲ್ಲಿ ಆಗಸ್ಟ್ 28 ರಂದು ಸಂಜೆ 4–00 ಗಂಟೆಗೆ ನಡೆಯುವ ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕರ್ನಾಟಕ ಚಲನಚಿತ್ರ ಅಕಾಡೆಮಿಯ ಅಧ್ಯಕ್ಷ ಎಸ್. ವಿ. ರಾಜೇಂದ್ರ ಸಿಂಗ್ ಬಾಬು ಅವರು ವಹಿಸುವರು. ಹಿರಿಯ ಸಾಹಿತಿ ಗೋಪಾಲ ವಾಜಪೇಯಿ, ಪರಿಸರ ಚಿಂತಕ ಸುಧೀಂದ್ರ ಹಾಲ್ದೊಡ್ಡೇರಿ ಹಾಗೂ ಚಿತ್ರ ನಿರ್ಮಾಪಕ ಯಶವಂತ ಸರದೇಶಪಾಂಡೆ ಅವರು ಪಾಲ್ಗೊಳ್ಳುವರು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಮತ:ಜಿಪಿಆರ್.

# ಕಬ್ಬನ್ ಉದ್ಯಾನವನದಲ್ಲಿ ಆಗಸ್ಟ್ 30 ರ ಭಾನುವಾರದ ವಿಶೇಷ ಕಾರ್ಯಕ್ರಮಗಳು

**ಬೆಂಗಳೂರು, ಆಗಸ್ಟ್ 27 (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ (ಕಬ್ಬನ್) ಉದ್ಯಾನವನದ ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ **ಮಾನ್ಯ ತೋಟಗಾರಿಕೆ ಮತ್ತು ಕೃಷಿ ಮಾರುಕಟ್ಟೆ ಸಚಿವರ ಆದೇಶ ಮತ್ತು ಸಲಹೆಯಂತೆ** ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ದಿನಾಂಕ:30–08–2015ರ ಭಾನುವಾರದಂದು ಕಬ್ಬನ್ ಉದ್ಯಾನವನದ ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1. ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "**ಉದ್ಯಾನವನದಲ್ಲಿ ಉದಯರಾಗ**" ಎಂಬ ಶೀರ್ಷಿಕೆಯಡಿ ಲೋಕೇಶ್ ಮತ್ತು ತಂಡದವರು, ಚನ್ನಪಟ್ಟಣರವರಿಂದ ಜಾನಪದಗೀತೆ, ಭಾವಗೀತೆ ಹಾಗೂ ಭಕ್ತಿಗೀತೆಗಳ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
2. ಬೆಳಿಗ್ಗೆ 8.00 ಗಂಟೆಯಿಂದ ಬೆಳಿಗ್ಗೆ 9.00 ಗಂಟೆಯವರೆಗೆ ಕರ್ನಾಟಕ ರಾಜ್ಯ ಮೀಸಲು ಪೊಲೀಸ್ ಪಡೆಯ 1 ಮತ್ತು 3ನೇ ಪಡೆಯ ಬ್ಯಾಂಡ್ ಕಲಾವಿದರು ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ ಆಕರ್ಷಕ "**ಪೊಲೀಸ್ ಬ್ಯಾಂಡ್**" ಸಂಗೀತ ಕಾರ್ಯಕ್ರಮವನ್ನು ನಡೆಸಿಕೊಡುತ್ತಾರೆ.
3. ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "**ಉದ್ಯಾನವನದಲ್ಲಿ ಸಂಧ್ಯಾರಾಗ**" ಎಂಬ ಶೀರ್ಷಿಕೆಯಡಿ ಪ್ರಭಾವತಿ ಮತ್ತು ತಂಡದವರು, ಭಕ್ತರಹಳ್ಳಿ, ಹೊಸಕೋಟೆ ತಾಲ್ಲೂಕುರವರಿಂದ ಜನಪದಗೀತೆ ಗಾಯನ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
4. ಬೆಳಿಗ್ಗೆ 6.00 ಗಂಟೆಯಿಂದ ಸಂಜೆ 6.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
5. ಉದ್ಯಾನವನದ ಆವರಣದಲ್ಲಿ ಜೈವಿಕ್ ಕೃಷಿಕ್ ಸೊಸೈಟಿ(ರಿ), ಲಾಲ್‌ಬಾಗ್, ಬೆಂಗಳೂರುರವರು ತಮ್ಮ ಮಾರಾಟ ಮಳಿಗೆಯಲ್ಲಿ ಸಾವಯವ ಪದ್ಧತಿಯಲ್ಲಿ ಬೆಳೆದ ಹಣ್ಣುಗಳಾದ ಮಾವು, ಪಪ್ಪಾಯ, ಏಲಕ್ಕಿ ಬಾಳೆ, ಮೂಸುಂಬಿ, ನೇರಳೆ(ಜಾಮೂನು) ಹಣ್ಣುಗಳ ಮಾರಾಟ, ಸಾವಯವ ಮಾವು, ಸೇಬು ಮತ್ತು ಸೀಬೆಹಣ್ಣಿನ ಜ್ಯೂಸ್, ಸಾವಯವ ಸೀಬೆ, ಮಾವಿನ ಹಣ್ಣಿನ ಫ್ರೂಟ್‌ಬಾರ್‌ಗಳು, ಸಾವಯವ ಹಲಸಿನ ಹಣ್ಣಿನ ಚಿಪ್ಸ್ ಮತ್ತು ಇತರೆ ಸಾವಯವ ಆಹಾರ ಪದಾರ್ಥಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
6. ಉದ್ಯಾನವನದ ಆವರಣದಲ್ಲಿ ಹಾಪ್‌ಕಾಮ್ಸ್, ಬೆಂಗಳೂರುರವರು ವಿವಿಧ Cut Fruits, Dry Fruits ಮತ್ತು ವಿವಿಧ ತಾಜಾ ಹಣ್ಣುಗಳು, ಪ್ಯಾಕ್ ಮಾಡಿದ ತಾಜಾ ತರಕಾರಿಗಳು ಹಾಗೂ ಹಣ್ಣಿನ ಜ್ಯೂಸ್‌ಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
7. ಉದ್ಯಾನವನದ ಆವರಣದಲ್ಲಿ ದಿ ನರ್ಸರಿಮೆನ್ ಕೋ–ಆಪರೇಟೀವ್ ಸೊಸೈಟಿ, ಲಾಲ್‌ಬಾಗ್, ಬೆಂಗಳೂರುರವರು ವಿವಿಧ ಅಲಂಕಾರಿಕ ಗಿಡಗಳು ಮತ್ತು ಉದ್ಯಾನವನ ಸಲಕರಣೆ ಮಾರಾಟ ಮತ್ತು ಮನೆಗಳಿಗೆ ಅಗತ್ಯವಿರುವ ಗಿಡಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
8. ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರುರವರ ವತಿಯಿಂದ ನಗರ ಕೇಂದ್ರ ಗ್ರಂಥಾಲಯ ಮತ್ತು ಇಂದಿರಾ ಪ್ರಿಯದರ್ಶಿನಿ ಮಕ್ಕಳ ಗ್ರಂಥಾಲಯದ ಆವರಣದಲ್ಲಿ ಪುಸ್ತಕ ಪ್ರದರ್ಶನವನ್ನು ಏರ್ಪಡಿಸಲಾಗಿದೆ.

9. ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

## ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:

### I. ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ

- ಬೆಳಿಗ್ಗೆ 07.00 ರಿಂದ 8.00 ಗಂಟೆಯವರೆಗೆ ಬೆಂಗಳೂರಿನ ಇಂದಿರಾನಗರ ಸಂಗೀತ ಸಭಾದ ಶ್ರೀಮತಿ ಉಷಾಶ್ರೀನಿವಾಸನ್‌ರವರ ವಿದ್ಯಾರ್ಥಿಗಳಿಂದ ಶಾಸ್ತ್ರೀಯ ಸಂಗೀತ, ದೇವರನಾಮಗಳ ಭಜನೆ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 9.00 ಗಂಟೆಯಿಂದ ಬೆಳಿಗ್ಗೆ 10.00 ಗಂಟೆಯವರೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಬಾಲಭವನ ಸೊಸೈಟಿ, ಬೆಂಗಳೂರುರವರ ಸಹಯೋಗದೊಂದಿಗೆ ಕಲಾಸಿಂಧು ಡ್ಯಾನ್ಸ್ ಅಕಾಡೆಮಿರವರ ವತಿಯಿಂದ ಭರತನಾಟ್ಯ ಪ್ರದರ್ಶನವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 10.00 ಘಂಟೆಯಿಂದ ಬೆಳಿಗ್ಗೆ 11.00 ಘಂಟೆಯವರೆಗೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿರವರ ವತಿಯಿಂದ ಸಾರ್ವಜನಿಕರಿಗೆ ಪರಿಸರಸ್ನೇಹಿ ಗಣೇಶ ಹಬ್ಬದ ಆಚರಣೆಯ ಕುರಿತು ಜಾಗೃತಿ ಮೂಡಿಸುವ ಸಲುವಾಗಿ ಮ್ಯಾಜಿಕ್ ಷೋ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಸಂಜೆ: 4.00 ಗಂಟೆಯಿಂದ 5.00 ಗಂಟೆಯವರೆಗೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಮತ್ತು ಅಕ್ಷಯ ಪೌಂಢೇಷನ್ ರವರ ಸಹಯೋಗದೊಂದಿಗೆ ಕೆ.ವಿ. ನಾಗರಾಜಮೂರ್ತಿ, ರಂಗಕರ್ಮಿಗಳು ಹಾಗೂ ಚಿಂತಕರು ಇವರಿಂದ ಕನ್ನಡ ಸಾಹಿತ್ಯಕ್ಕೆ ರಂಗಭೂಮಿ ಕೊಡುಗೆ ಉಪನ್ಯಾಸ ಕಾರ್ಯಕ್ರಮ ಹಾಗೂ ಕಾವ್ಯಶ್ರೀ ನಾಗರಾಜ್ (ನಂದಿಬೆಟ್ಟ)ಇವರಿಂದ ಕಥಕ್ ನೃತ್ಯ ಪ್ರದರ್ಶನವನ್ನು ಏರ್ಪಡಿಸಲಾಗಿದೆ.

### II. ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ

- ಬೆಳಿಗ್ಗೆ 6.00 ಗಂಟೆಯಿಂದ ಮಧ್ಯಾಹ್ನ 11.00 ಗಂಟೆಯವರೆಗೆ ಸಹಾಯ ಹೋಲಿಸ್ಟಿಕ್ ಇಂಟೆಗ್ರೇಟೀವ್ ಹಾಸ್ಪಿಟಲ್ ಪ್ರೈವೇಟ್ ಲಿಮಿಟೆಡ್, ಜಯನಗರ, ಬೆಂಗಳೂರುರವರ ವತಿಯಿಂದ ಅಯುರ್ವೇದ, ನ್ಯಾಚುರೋಪತಿ, ಹೋಮಿಯೋಪತಿ ಮತ್ತು ಯೋಗ ವಿಧಾನಗಳಿಂದ ಉತ್ತಮ ಆರೋಗ್ಯ ಕಾಪಾಡಿಕೊಳ್ಳುವ ಮಾಹಿತಿ ಮತ್ತು ಜಾಗೃತಿ ಕಾರ್ಯಕ್ರಮ ಹಾಗೂ ಆರೋಗ್ಯದ ತಪಾಸಣೆ, ಸಲಹೆಗಳು ಮತ್ತು ಗಿಡಮೂಲಿಕೆಗಳ ಸಿದ್ಧ ಔಷಧದ ಬಗ್ಗೆ ಮಾಹಿತಿ ನೀಡಲಾಗುವುದು.
- ಬೆಳಿಗ್ಗೆ 6.00 ಗಂಟೆಯಿಂದ ಬೆಳಿಗ್ಗೆ 10.00 ಗಂಟೆಯವರೆಗೆ ಘನತ್ಯಾಜ್ಯ ನಿರ್ವಹಣೆ ಮತ್ತು ಅಡುಗೆ ಮನೆಯಲ್ಲಿನ ತ್ಯಾಜ್ಯ (Kitchen Waste) ಉಪಯೋಗಿಸಿ ಗೊಬ್ಬರ ಉತ್ಪತ್ತಿ ಮಾಡುವುದು ಹಾಗೂ ಕಸದಿಂದ ಬಯೋಗ್ಯಾಸ್ ಉತ್ಪಾದನೆಯ ಬಗ್ಗೆ ಶ್ರೀ ಎನ್.ಎಸ್.ರಮಾಕಾಂತ್, Co-Founder, Solid Waste Management Round Table, Bengaluru ರವರಿಂದ ಪ್ರಾತ್ಯಾಕ್ಷಿಕೆ ಮೂಲಕ ತಿಳುವಳಿಕೆ ನೀಡಲಾಗುವುದು.
- ಬೆಳಿಗ್ಗೆ 9.00 ಗಂಟೆಯಿಂದ ಮಧ್ಯಾಹ್ನ 12.00 ಗಂಟೆಯವರೆಗೆ ತಾರಸಿ ಹಾಗೂ ಕೈತೋಟ (Kitchen Garden and Terrace Garden ) ಬಗ್ಗೆ ತೋಟಗಾರಿಕೆ ಉಪ ನಿರ್ದೇಶಕರು, ಬೆಂಗಳೂರು ನಗರರವರ ಸಹಕಾರದೊಂದಿಗೆ ಶ್ರೀ ಬಿ.ಚುಂಚಯ್ಯ, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು, ರಾಜಭವನ ಇವರು ಪ್ರಾತ್ಯಕ್ಷತೆ ಮೂಲಕ ತರಬೇತಿಯನ್ನು ನೀಡುವರು.
- ಡಾ. ಆರ್.ಪಿ. ತಿವಾರಿ, ನಿವೃತ್ತ ವಿಜ್ಞಾನಿಗಳು ಮತ್ತು ಅಣಬೆ ಬೆಳೆಗಾರರು ಇವರು ಅಣಬೆ ಬೇಸಾಯದ ಬಗ್ಗೆ ಮಾಹಿತಿಯನ್ನು ನೀಡಲಿದ್ದು, ಅಣಬೆ ಪ್ರಿಯರಿಗಾಗಿ ಅಣಬೆಯ ಮಾರಾಟದ ವ್ಯವಸ್ಥೆಯನ್ನು ಸಹಾ ಏರ್ಪಡಿಸಲಾಗಿದೆ

**III.Bangaluru Rising -Citizen Initiative for better Bangaluru ರವರ ವತಿಯಿಂದ ಬೆಳಿಗ್ಗೆ 7.30 ರಿಂದ**

**9.00 ಘಂಟೆಯವರೆಗೆ ಶ್ರಮದಾನವನ್ನು ಏರ್ಪಡಿಸಲಾಗಿದೆ ಎಂದು ತೋಟಗಾರಿಕೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**